ದಿನಾಂಕ: **18-10-2016**

ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆ : ಶ್ರೀ ಸಿ ಆರ್ ವಕೀಲರಿಂದ : –

ನಾನು ಸಲ್ಲಿಸಿದ ಪ್ರಮಾಣ ಪತ್ರದಲ್ಲಿ ಬರೆದ ಎಲ್ಲ ಸಂಗತಿಗಳು ಸರಿ ಇದೆ. ಅದರಲ್ಲಿ ಇರುವ ರುಜು ನನ್ನ ರುಜುವಾಗಿದೆ. ದಿ : 20-11-2010 ರ ಕ್ರಯದ ಕರಾರು ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ದಾವಾ ಆಸ್ತಿಗೆ ಸಂಬಂದಪಟ್ಟಂತೆ 2 ಪಹಣಿಗಳನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ- 2 ಎಂದು ಗುರುತಿಸಲಾಯಿತು. ಪ್ರತಿವಾದಿ ಕುಟುಂಬಕ್ಕೆ ಸಂಬಂಧಿಸಿದ ವಂಶವೃಕ್ಷವನ್ನು ಹಾಜರುಪಿಡಿಸಿದ್ದು ಅದನ್ನು ನಿಪಿ- 3 ಎಂದು ಗುರುತಿಸಲಾಯಿತು. ಪ್ರತಿವಾದಿಯ ತಂದೆಯಾದ ಪಾಪಣ್ಣನವರ ಮರಣ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ- 4 ಎಂದು ಗುರುತಿಸಲಾಯಿತು. ದಿ: 29-09-2012 ರ ಕಾನೂನು ತಿಳಡುವಳಿಕೆ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ- 5 ಎಂದು ಗುರುತಿಸಲಾಯಿತು. ಅದಕ್ಕೆ ಸಂಬಂಧಪಟ್ಟಂತಹ ಅಂಚೇ ರಶೀತಿ, ಲಕೋಟೆ ಮತ್ತು ಅಂಚೇ ಸ್ವೀಕೃತಿ ಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ- 6 ರಿಂದ 19 ಎಂದು ಗುರುತಿಸಲಾಯಿತು. ದಾವೆಯಲ್ಲಿ ಕೇಳಿರುವಂತೆ ಡಿಕ್ರಿ ಮಾಡಬೇಕಾಗಿ ಕೋರುತ್ತೇನೆ.

ಪ್ರತಿವಾದಿಗಳು ಏಕಪಕ್ಷೀಯವಾಗಿರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರ್‌ಗೊಳಿಸಿ ಪ್ರಿಂಟ್ ತೆಗೆಯಲಾಯಿತು)

ಓ. ಹೇ. ಕೇ. ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಸಿರಾ.